# ಕರ್ನಾಟಕ ಸರಕಾರ

## ಗ್ರಾಮಲೆಕ್ಕಿಗರ  ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
## ಜಿಲ್ಲಾಧಿಕಾರಿಗಳ ಕಛೇರಿ,
## ಗುಲಬರ್ಗಾ ಜಿಲ್ಲೆ, ಗುಲಬರ್ಗಾ - 585101

*****

# ಗ್ರಾಮಲೆಕ್ಕಿಗರ  ಹುದ್ದೆಯ ನೇರ ನೇಮಕಾತಿ ಸಂಬಂಧ
# ಮಾಹಿತಿ ಸೂಚಿ

## ಜಿಲ್ಲಾಧಿಕಾರಿಗಳ ಕಾರ್ಯಾಲಯ,  ಕಂದಾಯ ಇಲಾಖೆ, ಗುಲಬರ್ಗಾ ಜಿಲ್ಲೆ, ಗುಲಬರ್ಗಾ

## ಅಧಿಸೂಚನೆ

ನಂ: ಕಂದಾಯ/ಸಿಬ್ಬಂದಿ-1/85/2009-10  ದಿನಾಂಕ 26/09/2009

ಗುಲಬರ್ಗಾ ಜಿಲ್ಲೆ ಕಂದಾಯ ಘಟಕದಲ್ಲಿ ಬರುವ ತಾಲೂಕು ಕಛೇರಿಗಳಲ್ಲಿ  ಹಾಗೂ ಭೂಮಿ ಕೇಂದ್ರಗಳಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು ( **Revenue subordinate branch** ) ( **Cadre & Recruitment** ) (ತಿದ್ದುಪಡಿ) ನಿಯಮಗಳು **2009** ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂ.ಇ. **299**/ಬಿಎಸ್ ಸಿ **2006** ದಿನಾಂಕ **08/09/2009** ರಲ್ಲಿ ನೀಡಿದ ನಿರ್ದೇಶನದಂತೆ ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿಪಡಿಸಿದ ನಮೂನೆಗಳಲ್ಲಿ ಅರ್ಜಿಗಳನ್ನು  ಅಹ್ವಾನಿಸಲಾಗಿದೆ. ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಕಂ/ಸಿಬ್ಬಂದಿ-1/168/2008-09 ದಿನಾಂಕ **28/02/2009** ಯನ್ನು ಮೇಲೆ ಹೇಳಿದ ಅಧಿಸೂಚನೆಯ ಆದೇಶದಂತೆ ರದ್ದುಪಡಿಸಲಾಗಿದೆ.  ಸದ್ರಿ ಅಧಿಸೂಚನೆಯಂತೆ, ಈಗಾಗಲೇ ಸಲ್ಲಿಸಿದ ಅರ್ಜಿಗಳನ್ನು ಈ ಅಧಿಸೂಚನೆಯ ನೇಮಕಾತಿಗೆ ಪರಿಗಣಿಸಲಾಗುವುದಿಲ್ಲವೆಂದು ತಿಳಿಸಿದೆ.

**1. ಹುದ್ದೆಗಳ ವಿವರ ಮತ್ತು ವೇತನ ಶ್ರೇಣಿ:**

ಅ.ಹುದ್ದೆ ಹಾಗೂ ಸಂಖ್ಯೆ : ಗ್ರಾಮಲೆಕ್ಕಿಗರ ಹುದ್ದೆಗಳು  - ಒಟ್ಟು: 114

ಆ.ವೇತನ ಶ್ರೇಣಿ : **5800-100-6000-125-6500-150-7100-175-7800-200-8600 -225-9500-250-10500**

**2. ಹುದ್ದೆಗಳ ವರ್ಗೀಕರಣ :**

| ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ | ಪ್ರವರ್ಗ-1 | ಪ್ರವರ್ಗ-IIA | ಪ್ರವರ್ಗ-IIB | ಪ್ರವರ್ಗ-IIIA | ಪ್ರವರ್ಗ-IIIB | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 11 | 03 | 01 | 01 | 03 | 01 | 01 | 01 | 22 |
| ಮಹಿಳಾ ಅಭ್ಯರ್ಥಿ | 17 | 05 | 01 | 02 | 05 | 02 | 01 | 02 | 35 |
| ಮಾಜಿ ಸೈನಿಕರು | 05 | 01 | - | - | 01 | - | - | - | 07 |
| ಅಂಗವಿಕಲರು | 03 | 01 | 01 | 01 | 01 | 01 | 01 | 01 | 10 |
| ಯೋಜನಾ ನಿರಾಶ್ರಿತರು | 03 | 01 | - | - | 01 | - | - | - | 05 |
| ಗ್ರಾಮೀಣ ಅಭ್ಯರ್ಥಿ | 15 | 05 | 01 | 01 | 05 | 01 | 01 | 01 | 30 |
| ಕನ್ನಡ ಮಾಧ್ಯಮ ಅಭ್ಯರ್ಥಿ | 03 | 01 | - | - | 01 | - | - | - | 05 |
| ಒಟ್ಟು | 57 | 17 | 04 | 05 | 17 | 05 | 04 | 05 | 114 |

**3. ಶೈಕ್ಷಣಿಕ ವಿದ್ಯಾರ್ಹತೆ :** ಪಿ.ಯು.ಸಿ. ಪರೀಕ್ಷೆ ಅಥವಾ  **CBSE**  ಅಥವಾ **ICSE**  ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

4. ವಯೋಮಿತಿ : ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ಪ.ಪಂ/ಪ್ರ-1 | 18 ವರ್ಷ | 40 ವರ್ಷ |
| 2ಎ,2ಬಿ,3ಎ,3ಬಿ | 18 ವರ್ಷ | 38 ವರ್ಷ |
| ಸಾಮಾನ್ಯ ವರ್ಗ | 18 ವರ್ಷ | 35 ವರ್ಷ |

1977ರ ಕರ್ನಾಟಕ ಸರ್ಕಾರಿ ಸೇವಾ ( ಸಾಮಾನ್ಯ ನೇಮಕಾತಿ ) ನಿಯಮಾವಳಿಗಳ ನಿಯಮ 6ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ವಯೋಮಿತಿಯನ್ನು ಪರಿಶೀಲಿಸಲಾಗುವುದು.

5. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **30.10.2009 ಸಂಜೆ 5.30,**

6. ಅರ್ಜಿಯ ನಮೂನೆ :

1. ಆನ್ ಲೈನ್ ( On Line ) ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು:-

ಅರ್ಜಿಗಳನ್ನು **ಆನ್-ಲೈನ್ (Online)** (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಆನ್ ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಿದವರು ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಕಚೇರಿಯ ಅಧಿಕೃತ ವೆಬ್ ಸೈಟ್‌ಗಳಾದ http://recruitment.kar.nic.in/va-gulbarga "ಆನ್ ಲೈನ್ ಮುಖಾಂತರ ಗ್ರಾಮಲೆಕ್ಕಿಗರ ನೇರ ನೇಮಕಾತಿ ಅರ್ಜಿ ತುಂಬುವುದು" ರ ಮೇಲೆ ಕ್ಲಿಕ್‌ಮಾಡಿದಾಗ ತೆರೆದ ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement slip) ಮತ್ತು ದ್ವಿಪ್ರತಿ ಚಲನ್ ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ ಬ್ಯಾಂಕ್ ಆಫ್ ಇಂಡಿಯಾ ಅಥವಾ ಸ್ಟೇಟ ಬ್ಯಾಂಕ್ ಹೈದ್ರಾಬಾದ ಯಾವುದಾದರೂ ಶಾಖೆಯಲ್ಲಿ ಪಾವತಿಸಬೇಕು. ಪಾವತಿಸುವಾಗ ಚಲನ್‌ನಲ್ಲಿ ಅರ್ಜಿಯ ಸಂಖ್ಯೆ (Reference Number) ಮತ್ತು ಅಭ್ಯರ್ಥಿಯ ಹೆಸರು ಸರಿಯಾಗಿ ನಮೂದಾಗಿದೆಯೇ ಎಂದು ಅಭ್ಯರ್ಥಿಯು ಪರಿಶೀಲಿಸುವುದು. ಅಭ್ಯರ್ಥಿಗಳು ಸ್ವೀಕೃತಿ ಪತ್ರವನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು . ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗಧಿಪಡಿಸಿದ ದಿನಾಂಕದಂದು ( **15.12.2009** ) ಹಾಜರುಪಡಿಸತಕ್ಕದ್ದು.

ಯಾವುದೇ ರೀತಿಯ ಸರ್ಟಿಫಿಕೇಟ್‌ಗಳನ್ನು ಅರ್ಜಿಯೊಂದಿಗೆ ಸಲ್ಲಿಸುವ ಅಗತ್ಯ ಇರುವುದಿಲ್ಲ. ಆದರೆ ಮೂಲದಾಖಲಾತಿಯ ಪರಿಶೀಲನಾ ದಿನಾಂಕದಂದು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ಒಳಗಾಗಿ ಪಡೆದ ದೃಢಪತ್ರಗಳನ್ನು ಹಾಜರುಪಡಿಸುವುದು.

ಕಚೇರಿಯ ಅಧಿಕೃತ ವೆಬ್ ಸೈಟ್‌ಗಳಾದ http://recruitment.kar.nic.in/va-gulbarga ಅಥವಾ http://www.gulbarga.nic.in ರಲ್ಲಿ ನೀಡಿರುವ **ಹೆಚ್ಚಿನ ಮಾಹಿತಿ** ಯನ್ನು ಪರಿಶೀಲಿಸಬಹುದಾಗಿದೆ. ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 08472-278605 ಅಥವಾ dcoglb@gmail.com,vagulbarga@gmail.com ಇ-ಮೈಲ್ ಮೂಲಕ ಹೆಚ್ಚಿನ ಮಾಹಿತಿ ಬಯಸಬಹುದು.

## 7. ಅಭ್ಯರ್ಥಿ ಬ್ಯಾಂಕ್‌ಗೆ ಪಾವತಿಸುವ ನಿಗಧಿತ ಶುಲ್ಕ ಬಗ್ಗೆ :

1) ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ, ಪ್ರವರ್ಗ-1 ಮತ್ತು ಮಹಿಳಾ ಅಭ್ಯರ್ಥಿಗಳಿಗೆ ನಿಗದಿತ ಶುಲ್ಕ ರೂ **100-00** ಮಾತ್ರ .

2) ಸಾಮಾನ್ಯ ಅಭ್ಯರ್ಥಿಗಳಿಗೆ ರೂ **200-00** ಮಾತ್ರ.

## 8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರಬಯಸುವ –

* ಪ.ಜಾ/ಪ.ಪಂ.ಅಭ್ಯರ್ಥಿಗಳು ನಮೂನೆ ' ಡಿ'
* ಪ್ರವರ್ಗ-1 ಅಭ್ಯರ್ಥಿಗಳು ನಮೂನೆ ' ಇ '
* ಪ್ರವರ್ಗ -2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್ ' ನಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪ್ರಮಾಣ ಪತ್ರವನ್ನು ಪಡೆದು ಇದರ ದೃಢೀಕೃತ ನಕಲನ್ನು ಅರ್ಜಿಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

## 9. ಗ್ರಾಮೀಣ ಅಭ್ಯರ್ಥಿ :

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿರಿಸಿದ್ದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅಭ್ಯರ್ಥಿಗಳು ನಮೂನೆ -2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ -1 ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರರಿಂದ ಪಡೆದು ದೃಢೀಕೃತ ಅರ್ಜಿಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸ ಬೇಕು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ ಮತ್ತು ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

## 10. ಕನ್ನಡ ಮಾಧ್ಯಮ ಅಭ್ಯರ್ಥಿ :

ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

## 11.ಅಂಗವಿಕಲ ಅಭ್ಯರ್ಥಿ :

ಕರ್ನಾಟಕ ನಾಗರೀಕ ಸೇವಾ ( ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9(1-ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.5ರಷ್ಟು ಸಮತಳ

ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ: ಸಿಆಸುಇ 128/ಸೆನೆನಿ 2006/ ದಿ: 1.8.2009ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಎ.115 ಸೆನೆನಿ 2005, ದಿನಾಂಕ 19/11/2005ರಲ್ಲಿ ನಿಗಧಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಅದರ ದೃಡೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸ ಬೇಕು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

## 12. ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ:

ಯೋಜನೆಗಳಿಂದ ನಿರ್ವಸಿತರಾದ ಕುಟುಂಬಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರು ನೀಡಿದ ಪ್ರಮಾಣ ಪತ್ರದ ದೃಡೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

## 13..ಅರ್ಹತಾ ಷರತ್ತುಗಳು

ಅ) ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅಭ್ಯರ್ಥಿ ಅನರ್ಹರೆಂದು ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ.

ಈ) ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿ ವಯೋಮಿತಿಯೊಳಗಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅರ್ಹತೆಯನ್ನು ಹೊಂದಿರುತ್ತಾರೆ.

## 14. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಕೆಳಕಂಡ ಪ್ರಮಾಣ ಪತ್ರಗಳನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸ ಬೇಕು.

1. ಹುದ್ದೆಗಳಿಗೆ ನಿಗದಿ ಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣಪತ್ರಗಳು.
2. ಜನನ ಪ್ರಮಾಣ ಪತ್ರ ಅಥವಾ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ.
3. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
4. ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1,ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಗಳ ಮೀಸಲಾಗಿ ಪ್ರಮಾಣ ಪತ್ರಗಳು– ನಿಗದಿತ ನಮೂನೆಯಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ-1 ಮತ್ತು 2 ರಲ್ಲಿ ( ಮೀಸಲಾತಿ ಕೋರಿದ್ದಲ್ಲಿ )

6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣಪತ್ರ ( ಮೀಸಲಾತಿ ಕೋರಿದ್ದಲ್ಲಿ )
7. ಅಂಗವಿಕಲ ಮೀಸಲಾತಿ ಅಭ್ಯರ್ಥಿಯ ಪ್ರಮಾಣಪತ್ರ ( ಮೀಸಲಾತಿ ಕೋರಿದ್ದಲ್ಲಿ )
8. ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿಯ ಪ್ರಮಾಣಪತ್ರ ( ಮೀಸಲಾತಿ ಕೋರಿದ್ದಲ್ಲಿ )
9. ವಿಧವೆಯಾದಲ್ಲಿ ಸಕ್ಷಮ ಪ್ರಾಧೀಕಾರದಿಂದ ಪಡೆದ ಪ್ರಮಾಣಪತ್ರ
10. ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣಪತ್ರದ ಬಗ್ಗೆ ಜಿಲ್ಲಾಧಿಕಾರಿ (ಅಧ್ಯಕ್ಷರು,ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
11. ಅರ್ಜಿಯಲ್ಲಿ ಸಲ್ಲಿಸಿರುವ ಮೀಸಲಾತಿ ಕೋರಿರುವ /ವಯೋಮಿತಿ ರಿಯಾಯಿತಿ ಕೋರಿರುವ ಅಗತ್ಯ ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಸಂಬಂದಿಸಿದ ಕಚೇರಿಯಿಂದ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು, ಮೂಲದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸುವುದು.

## 15. ಗುಲಬರ್ಗಾ ಜಿಲ್ಲಾಧಿಕಾರಿಯವರ ಕಛೇರಿಯೊಂದಿಗೆ ಪತ್ರ ವ್ಯವಹಾರ:

ಗುಲಬರ್ಗಾ ಜಿಲ್ಲಾಧಿಕಾರಿಯವರ ಕಛೇರಿಯು ಅಭ್ಯರ್ಥಿಯ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿ ಮೂಲಕ ಗುಲಬರ್ಗಾ ಜಿಲ್ಲಾಧಿಕಾರಿಯವರ ಕಛೇರಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಪ್ರಾಧಿಕಾರವು ಪ್ರಯತ್ನಿಸುವುದು. ಅದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸ ತಕ್ಕದ್ದು.

## 16. ಇತರ ಸೂಚನೆಗಳು :

1. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಪಡೆದ **CHALLAN** ಹಾಗೂ **Acknowledgement Slip** ಮಡಚುವುದಾಗಲೀ, ಹರಿಯುವುದಾಗಲೀ ಮಾಡದೇ ಹಾಳಾಗದಂತೆ ಎಚ್ಚರ ವಹಿಸತಕ್ಕದ್ದು.
2. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣ ಪತ್ರ (**NO OBJECTION CERTIFICATE**)ವನ್ನು ಪಡೆದು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸ ಬೇಕು.
3. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ, ಗುಲಬರ್ಗಾಜಿಲ್ಲೆ ಗುಲಬರ್ಗಾ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
4. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯು ಯಾವುದೇ ಹಕ್ಕು ದೊರೆಯುವುದಿಲ್ಲ.ಆಯ್ಕೆಯ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದ ಇರುವುದಿಲ್ಲ.

## 17. ದುರ್ನಡತೆ :

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವಂತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಅಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**18. ಆಯ್ಕೆ ವಿಧಾನ :**

ಕರ್ನಾಟಕ ಜನರಲ್ ಸರ್ವೀಸಸ್ (Revenue subordinate branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು ಕರ್ನಾಟಕ ನಾಗರೀಕ ಸೇವಾ(ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

(ಡಾ:ಆರ್.ವಿಶಾಲ)
ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ
ಗುಲಬರ್ಗಾ ಜಿಲ್ಲೆ, ಗುಲಬರ್ಗಾ.

**ಪ್ರತಿ :**

1) ಮುಖ್ಯ ಕಾರ್ಯದರ್ಶಿಗಳು,ಸಿಬ್ಬಂದಿ ಮತ್ತು ಆಡಳಿ ಸುಧಾರಣೆ ಇಲಾಖೆ,ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.

2) ಪ್ರಧಾನ ಕಾರ್ಯದರ್ಶಿಗಳು,ಕಂದಾಯ ಇಲಾಖೆ,ಸೇವೆಗಳು, ಬಹುಮಹಡಿಗಳ ಕಟ್ಟಡ,ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.

3) ಪ್ರಾದೇಶಿಕ ಆಯುಕ್ತರು,ಗುಲಬರ್ಗಾ ರವರ ಅವಗಾಹನೆಗೆ ಸಲ್ಲಿಸಿದೆ.

4) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಯವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

5) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಗುಲಬರ್ಗಾಜಿಲ್ಲೆ,ಗುಲಬರ್ಗಾ

6) ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ, ಗುಲಬರ್ಗಾಜಿಲ್ಲೆ,ಗುಲಬರ್ಗಾ

7) ಉಪನಿರ್ದೇಶಕರು,ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ, ಗುಲಬರ್ಗಾಜಿಲ್ಲೆ,ಗುಲಬರ್ಗಾ

8) ಉಪವಿಭಾಗಾಧಿಕಾರಿಯವರು,ಗುಲಬರ್ಗಾ/ಯಾದಗೀರ/ಸೇಡಂ ವಿಭಾಗ- ಇವರಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

10) ಗುಲಬರ್ಗಾ ಜಿಲ್ಲೆಯ ಎಲ್ಲಾ ತಹಶೀಲ್ದಾರರು/ವಿಶೇಷ ತಹಶೀಲ್ದಾರರು ಇವರಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.